ಓ ಎಸ ನಂ. **79/2018**
ಪಿಡಬ್ಲೂ-2 ( ಹಣಮಮ್ಮ )

ಇಂದು ದಿನಾಂಕಃ **28-09-2021** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

ಪಾಟೀ ಸವಾಲುಃ ಶ್ರೀ ವಿ. ಜೆ. ಎಮ್ ವಕೀಲರಿಂದ ( 1 ರಿಂದ 3 ನೇ ಪ್ರತಿವಾದಿ ಪರ )

ವಾಸವದತ್ತಾ ಕಂಪನಿಯಲ್ಲಿ ಯಾವುದೇ ವ್ಯವಹಾರ ಹಣಕಾಸಿನ ಮಾಡಬೇಕೆಂದರೆ ರಸೀದಿ ತೆಗೆದುಕೊಳ್ಳುತ್ತಾರೆ ಎಂದರೆ ಸರಿ. ನನ್ನ ಗಂಡನಿಗೆ ನೀಡಿರುವಂತಹ ಹಣಕ್ಕೆ ಸಂಬಂಧಪಟ್ಟಂತೆ ರಸೀದಿಯನ್ನು ನೀಡಿದ್ದಾರೆ ಎಂದರೆ ಸರಿ. ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿ. 2003-2004 ರಲ್ಲಿ ನನಗೆ ಹೊಲವನ್ನು ಖರೀದಿ ಮಾಡಲು ಬರುತಿತ್ತು ಎಂದರೆ ಸರಿ. ನಾನು ಖರೀದಿ ಮಾಡಿರುವ ಆಸ್ತಿಯ ಸರ್ವೆ ನಂ.154 ಆಗಿರುತ್ತದೆ. ಅದಕ್ಕೆ ಸಂಬಂಧಪಟ್ಟಂತೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅದನ್ನು ರೂ.1,41,000/- ಕ್ಕೆ ಖರೀದಿ ಮಾಡಿದ್ದು, ಮೊದಲು ನನ್ನ ತಂದೆಯ ಹೆಸರಿನಲ್ಲಿ ನಂತರ ನನ್ನ ಹೆಸರಿಗೆ ಮಾಡಿಸಿರುತ್ತಾರೆ. ಅದನ್ನು ಸುಬ್ಬಣ್ಣಗೌಡರಿಂದ ಖರೀದಿ ಮಾಡಿರುತ್ತೇವೆ. ಸದರಿ ಪಹಣಿಯಲ್ಲಿ ಎಷ್ಟು ಆಸ್ತಿ ಇತ್ತು ಎಂದು ನನಗೆ ಗೊತ್ತಿಲ್ಲ, ನಾನು 24 ಗುಂಟೆ ಆಸ್ತಿಯನ್ನು ಖರೀದಿ ಮಾಡಿರುತ್ತೇನೆ. 2003-2004 ರಲ್ಲಿ ನನ್ನ ತಂದೆಯವರು ಶಿಕ್ಷಕ ವೃತ್ತಿಯಿಂದ ನಿವೃತ್ತಿ ಹೊಂದಿದ್ದರು ಎಂದರೆ ಅದಕ್ಕಿಂತಲೂ ಮುಂಚೆ ನಿವೃತ್ತಿ ಹೊಂದಿರುತ್ತಾರೆ. ನನ್ನ ತಂದೆಯವರ ನಿವೃತ್ತಿ ಹೊಂದಿದ ದಿನಾಂಕವನ್ನು ನನಗೆ ಹೇಳಲು ಆಗುವುದಿಲ್ಲ. ನನ್ನ ತಂದೆ ನಿವೃತ್ತಿಯಾದ ನಂತರ ಒಕ್ಕಲುತನ ಮಾಡುತ್ತಿದ್ದರು ಎಂದರೆ ಸರಿ. ನನ್ನ ತಮ್ಮ 2 ನೇ ಪ್ರತಿವಾದಿ ಅವರೊಂದಿಗೆ ಒಕ್ಕಲುತನ ಮತ್ತು ಶಾಲಾ ಶಿಕ್ಷಕರಾಗಿ ಕೆಲಸ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನನ್ನ ತಂದೆಯವರಿಗೆ ಆರೋಗ್ಯ ಸರಿಯಿಲ್ಲದೇ ಇದ್ದಾಗ ಅವರ ಮೊಮ್ಮಗನಾದ ರೋಹಿತ ರೆಡ್ಡಿ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನಾನು ಹೊಲವನ್ನು ಖರೀದಿ ಮಾಡಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಆಸ್ತಿಯನ್ನು ನನ್ನ ತಂದೆಯವರು ಖರೀದಿ ಮಾಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಗಂಡ ಸಿದ್ದಪ್ಪನವರು ವಾಸವದತ್ತ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ಅವರಿಗೆ ರೂ.3,00,000/- ಗಳನ್ನು ಸೇವಾ ಭತ್ತೆ ಬಂದಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನ್ನ ತಂದೆ ಖರೀದಿ ಮಾಡಿದ ಸ್ವಂತ ಆಸ್ತಿ ಎಂದರೆ ಸರಿಯಲ್ಲ. ದಾವಾ ಆಸ್ತಿಗಳ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ಅದನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಮ್.ಎಫ್.ಸಿ, ಸೇಡಂ.